**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : 2013–14ನೇ ಸಾಲಿನಲ್ಲಿ ಸೌರ ಬೆಳಕು ಯೋಜನೆಯಡಿ ಹೆಚ್ಚುವರಿ ಅನುದಾನ ಬಿಡುಗಡೆ ಕುರಿತು.

ಉಲ್ಲೇಖ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ/23/ಜೈಅಯೋ/2013 ದಿನಾಂಕ : 16.11.2013

2) ಮು.ಕಾ.ನಿ.ಅ. ಜಿಲ್ಲಾ ಪಂಚಾಯತ್, ಗದಗರವರ ಪತ್ರ ಸಂಖ್ಯೆ : ಜಿಪಂಗ/ಅಭಿ /ಸೌರಬೆಳಕು/ಅನುಷ್ಠಾನ/ಹೆ.ಅ/1/2013–14 ದಿನಾಂಕ 06.02.2014

**ಪ್ರಸ್ತಾವನೆ :**

ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ***ಸೌರ ಬೆಳಕು*** ಕಾರ್ಯಕ್ರಮಕ್ಕೆ 2013–14ನೇ ಸಾಲಿಗೆ ಆಯವ್ಯಯ ಅನುದಾನ ರೂ. 310.00 ಲಕ್ಷಗಳನ್ನು ಒದಗಿಸಲಾಗಿದ್ದು, ಈ ಪೈಕಿ ರೂ. 300.00 ಲಕ್ಷಗಳನ್ನು ಈಗಾಗಲೇ ಬಿಡುಗಡೆ ಮಾಡಿದೆ. ಈ ಯೋಜನೆಗೆ 5 ಜಿಲ್ಲೆಗಳಾದ ಉತ್ತರ ಕನ್ನಡ, ಕೋಲಾರ, ಮಂಡ್ಯ, ಗದಗ ಮತ್ತು ಯಾದಗಿರಿ ಜಿಲ್ಲೆ ಆಯ್ಕೆಯಾಗಿದೆ. ಈ ಯೋಜನೆಯ ಮಾರ್ಗಸೂಚಿಯಂತೆ ಯೋಜನೆಯನ್ನು ಮೊದಲಿಗೆ ಅನುಷ್ಠಾನ ಮಾಡುವ ಜಿಲ್ಲೆಗೆ ಉಳಿದ ರೂ. 10.00 ಲಕ್ಷಗಳನ್ನು ಹಂಚಿಕೆ ಮಾಡಲು ಅವಕಾಶವಿರುತ್ತದೆ. ಆದ್ದರಿಂದ ಗದಗ ಜಿಲ್ಲಾ ಪಂಚಾಯತ್‌ರವರು ಈ ಯೋಜನೆಯನ್ನು ಮೊದಲಿಗೆ ಅನುಷ್ಠಾನ ಮಾಡಿರುವುದನ್ನು ಉಲ್ಲೇಖ (2)ರ ಪತ್ರದಲ್ಲಿ ವರದಿ ಮಾಡಿರುತ್ತಾರೆ. ಆದ್ದರಿಂದ ಗದಗ ಜಿಲ್ಲಾ ಪಂಚಾಯತ್‌ಗೆ ಉಳಿದ ರೂ. 10.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಜೈಅಯೋ 2013, ಬೆಂಗಳೂರು, ದಿನಾಂಕ 28.02.2014**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **₹ 10.00** ಲಕ್ಷಗಳನ್ನು (ರೂ. ಹತ್ತು ಲಕ್ಷಗಳು ಮಾತ್ರ) ಗದಗ ಜಿಲ್ಲಾ ಪಂಚಾಯತ್‌ಗೆ 2013–14ನೇ ಸಾಲಿನ ಸೌರ ಬೆಳಕು ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ 2810-01-198-1-01 ಯೋಜನೆ ಅಡಿಯಲ್ಲಿ ಹೆಚ್ಚುವರಿಯಾಗಿ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಈ ಅನುದಾನವನ್ನು ಪೂರ್ಣವಾಗಿ ಬಳಕೆ ಮಾಡಿ ಬಳಕೆ ಪ್ರಮಾಣ ಪತ್ರವನ್ನು 30.06.2014ರೊಳಗೆ ಸಲ್ಲಿಸತಕ್ಕದ್ದು ಮತ್ತು ಮಾಸಿಕ ಪ್ರಗತಿ ವರದಿಯನ್ನು ಸಹ ಸಲ್ಲಿಸತಕ್ಕದ್ದು.

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿರುತ್ತದೆ. ಸದರಿ ಅನುದಾನವನ್ನು 31ನೇ ಮಾರ್ಚ್ 2014ರೊಳಗೆ ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ಹಾಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅನಧಿಕೃತ ಟಿಪ್ಪಣಿ ಸಂಖ್ಯೆ ಗ್ರಾಅಪ 123 ಪಿಬಿಎಸ್ 2014 ದಿನಾಂಕ 28.02.2014ರಲ್ಲಿ ಸಹಮತಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರೋಹಿಣಿ ಸಿಂಧೂರಿ)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ ಜಿಲ್ಲೆ.
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಗದಗ ಜಿಲ್ಲೆ.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.